862(997) ಶ್ರೀ ಶ್ರೀರಾಮರೆಡ್ಡಿ. ಜಿ.ವಿ. (ಬಾಗೇಪಲ್ಲಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಅಧಿಕೃತ ಸಾರಾಯಿ ಅಂಗಡಿಗಳಿಗಿಂತ ಅನಧಿಕೃತ ಸಾರಾಯಿ ಅಂಗಡಿಗಳು ಅಧಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅನಧಿಕೃತ ಸಾರಾಯಿ ಅಂಗಡಿಗಳನ್ನು ನಿಯಂತ್ರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :

ಅ) ರಾಜ್ಯದಲ್ಲಿ ಅಧಿಕೃತ ಸಾರಾಯಿ ಅಂಗಡಿಗಳಿಗಿಂತ ಅನಧಿಕೃತ ಸಾರಾಯಿ ಅಂಗಡಿಗಳು ಅಧಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದಾಗ್ಯೂ ಕೆಲವು ಕಡೆಗಳಲ್ಲಿ ಅನಧಿಕೃತ ಸಾರಾಯಿ ಅಂಗಡಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಅನಧಿಕೃತ ಸಾರಾಯಿ ಅಂಗಡಿಗಳು ಕಂಡುಬಂದ ಕಡೆಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಿ ಅವುಗಳನ್ನು ಮುಚ್ಚಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಅವಶ್ಯಕತೆ ಕಂಡುಬಂದ ಕಡೆಗಳಲ್ಲಿ ಗುತ್ತಿಗೆದಾರರಿಂದ ಸನ್ನದು ಫೀ ಪಾವತಿಯಾದ ನಂತರ ಅವುಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಕ್ರಮಗೊಳಿಸಲಾಗುತ್ತಿದೆ.

864(196) ಶ್ರೀ ಸುನೀಲ್ ಕುಮಾರ್ ವಿ. (ಕಾರ್ಕಳ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ಜಿಲ್ಲೆಯ ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನದ ಸ್ಥಳದಲ್ಲಿ ಖಾಸಗಿ ಕಂಪನಿಗೆ ಜಂಗಲ್ ರೆಸಾರ್ಟ್ ಪ್ರಾರಂಭಿಸಲು ಸರ್ಕಾರ ಅನುಮತಿ ನಿಡಿದೆಯೇ;

ಆ) ಯಾವ ಆಧಾರದ ಮೇಲೆ ಈ ಸ್ಥಳ ನೀಡಲಾಗಿದೆ; ಎಷ್ಟು ವರ್ಷದ ಅವಧಿಗೆ ಅನುಮತಿಯನ್ನು ನೀಡಲಾಗಿದೆ; ಇದಕ್ಕಾಗಿ ಅನುಸರಿಸಿದ ಮಾನದಂಡಗಳೇನು;

ಇ) ಇದರಿಂದ ಸರ್ಕಾರಕ್ಕೆ ಬರುವ ವಾರ್ಷಿಕ ಆದಾಯ ಎಷ್ಟು; (ವಿವರ ನೀಡುವುದು);

ಈ) ಇದೇ ಮಾದರಿಯಲ್ಲಿ ಬೇರೆ ಖಾಸಗಿ ಕಂಪನಿಗಳಿಗೂ ರೆಸಾರ್ಟ್ ತೆರೆಯಲು ಸರ್ಕಾರ ಅವಕಾಶ ಕಲ್ಪಿಸಿಕೊಡುವುದೇ?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಮೈಸೂರು ಜಿಲ್ಲೆ ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನದೊಳಗೆ ಯಾವುದೇ ಖಾಸಗಿ ಕಂಪನಿಗಳಿಗೆ ರೆಸಾರ್ಟ್ ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವುದಿಲ್ಲ. ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನದ ಹೊರ ವಲಯದಲ್ಲಿ ಈ ಕೆಳಕಂಡ ಸಂಸ್ಥೆಗಳು ರೆಸಾರ್ಟ್ ನಡೆಸುತ್ತಿದ್ದಾರೆ. ಈ ರೆಸಾರ್ಟ್‌ಗಳನ್ನು ಪ್ರಾರಂಭಿಸಲು ಅರಣ್ಯ ಇಲಾಖಾವತಿಯಿಂದ ಯಾವುದೇ ಪೂರ್ವಾನುಮತಿ ನೀಡಿರುವುದಿಲ್ಲ.

1. ಮೆ: ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಲಿ., ಬೆಂಗಳೂರು
2. ಮೆ: ಬುಶ್‌ಬೆಟ್ಟ, ಬೆಂಗಳೂರು.
3. ಮೆ: ಜಂಗಲ್ ಇನ್, ಹುಣಸೂರು
4. ಮೆ: ಕಬಿನಿ ಪ್ಲಾನ್‌ಟೇಶನ್ ರೆಸಾರ್ಟ್, ಮೈಸೂರು
5. ಮೆ: ರಾಮ್ ವಾಟರ್ ವುಡ್ಸ್, ಮೈಸೂರು

ಆದರೆ ಈ ರೆಸಾರ್ಟ್‌ಗಳಿಗೆ ಬರುವ ಪ್ರವಾಸಿಗರನ್ನು ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನದೊಳಗೆ ಅವರ (ಖಾಸಗಿ) ವಾಹನಗಳಲ್ಲಿ ಕೊಂಡೊಯ್ಯಲು ವನ್ಯಜೀವಿ ಸಂರಕ್ಷಣಾ ಕಾಯಿದೆ 1972 (ತಿದ್ದುಪಡಿ 1993) ರ ಸೆಕ್ಷನ್ 28 ಮತ್ತು 33 ರನ್ವಯ ಅನುಮತಿ ನೀಡಲಾಗಿದೆ.

ಆ) ಅನ್ವಯಿಸುವುದಿಲ್ಲ.

ಇ) ಸದರಿ ಖಾಸಗಿ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದದ ಪ್ರಕಾರ ಸರ್ಕಾರಕ್ಕೆ ಸರಾಸರಿ ರೂ. 15 ಲಕ್ಷ ವಾರ್ಷಿಕ ಆದಾಯವಿರುತ್ತದೆ.

ಈ) ಅನ್ವಯಿಸುವುದಿಲ್ಲ. ಅರಣ್ಯ ಮತ್ತು ವನ್ಯಜೀವಿ ಪ್ರದೇಶಗಳಲ್ಲಿ ಪಾಲಿಸಬೇಕಾಗಿರುವ ನೈಸರ್ಗಿಕ ಪ್ರವಾಸೋದ್ಯಮ ನೀತಿ ಕುರಿತಂತೆ ಸರ್ಕಾರದ ಆದೇಶ ಸಂ: ಅಪಜೀ 60 ಎಫ್‌ಎಪಿ 2003, ದಿನಾಂಕ: 28–08–2004ರ ಪ್ರಕಾರ ಈ ಕೆಳಕಂಡವರಿಗೆ ವನ್ಯಜೀವಿ ಪ್ರದೇಶಗಳಲ್ಲಿ ಪ್ರವಾಸೋದ್ಯಮ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಮೆ: ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಲಿ.,

1. ಯುತ್ ಹಾಸ್ಟೆಲ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ನಂತಹ ಸಾಹಸ ಗುಂಪುಗಳು.
2. ಇಲಾಖಾ ಸೌಕರ್ಯಗಳು ಲಭ್ಯವಿದ್ದಲ್ಲಿ ನೇರ ಪ್ರವೇಶಕ್ಕೆ ಅವಕಾಶ ಕಲ್ಪಿಸಿದೆ.

866 (1459) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರದ ಸುತ್ತಮುತ್ತಲಿನ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಯಾವ ಯಾವ ಎಷ್ಟು ಉದ್ದದ ರಸ್ತೆಗಳು ಹದಗೆಟ್ಟಿರುವುದು ಗಮನಕ್ಕೆ ಬಂದಿದೆ;

ಇ) ಸದರಿ ರಸ್ತೆಗಳ ದುರಸ್ತಿಗೆ ಸರ್ಕಾರ ಕ್ರಮಗಳನ್ನು ಕೈಗೊಂಡಿದೆಯೇ;

ಈ) ಕೈಗೊಂಡಿದ್ದಲ್ಲಿ ಎಷ್ಟು ಅಂದಾಜು ವೆಚ್ಚದಲ್ಲಿ ಎಷ್ಟು ಉದ್ದದ ಯಾವ ರಸ್ತೆಗಳನ್ನು ದುರಸ್ತಿಪಡಿಸಲು ಯೋಚಿಸಲಾಗಿದೆ?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂದನ ಸಚಿವರು) :

ಅ) ಬಂದಿರುತ್ತದೆ.

ಆ) ರಸ್ತೆಗಳ ವಿವರಗಳನ್ನು ಅನುಬಂಧ–ಅ ರಲ್ಲಿ ನೀಡಿದೆ.

ಇ) ವಿವರಗಳನ್ನು ಅನುಬಂಧ ಆ ನಲ್ಲಿ ನೀಡಿದೆ.

ಈ) ವಿವರಗಳನ್ನು ಅನುಬಂಧ ಆ ನಲ್ಲಿ ನೀಡಿದೆ.